**ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸವಣೂರು.**

ಸಿ.ಸಿ ಸಂಖ್ಯೆಃ 519/2023

ಪಿಡಬ್ಲ್ಯೂಃ 01 ಸಿಡಬ್ಲ್ಯೂ ಃ 02
ದಿನಾಂಕಃ 11-03-2025
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | - | ಗಣೇಶ ಲಮಾಣಿ |
| ತಂದೆ ಹೆಸರು | - | ಮಲ್ಲೇಶಪ್ಪ ಲಮಾಣಿ |
| ವಯಸ್ಸು | - | 34 ವರ್ಷ |
| ಉದ್ಯೋಗ | - | ಕೂಲಿಕೆಲಸ |
| ವಾಸ ಸ್ಥಳ | - | ಬೇವಿನಹಳ್ಳಿ |

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದ.**

ಚಾಸಾ- 3 ರವರ ಪರಿಚಯ ನನಗೆ ಇದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಸಹಿ ಮಾಡು ಎಂದಿದಕ್ಕೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮುದ್ದೆಮಾಲನ್ನು ಜಪ್ತಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ಅದು ಸ್ಥಳ ಪಂಚನಾಮೆಯಾಗಿದ್ದು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸ್ಥಳ ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು 1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಿದ್ದು ಅದು ಮಾದರಿ ಶೀಲಿನ ನಕಲು ಮತ್ತು ಮಾದರಿ ಚೀಟಿಯಾಗಿದ್ದು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಮಾದರಿ ಶೀಲಿನ ನಕಲು ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು, ಮಾದರಿ ಚೀಟಿಯ ನಕಲನ್ನು ನಿಪಿ- 3 ಎಂದು ಸಾಕ್ಷಿಯ ಸಹಿಯನ್ನು ನಿಪಿ- 3(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಸುಮಾರು ಎರುಡು ವರ್ಷದ ಹಿಂದೆ ಮಾಡಿರುತ್ತೇನೆ. ಯಾವ ಉದ್ದೇಶಕ್ಕಾಗಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ.ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದ.</u>**

ದಿಃ 31-03-2023 ರಂದು ಮುಂಜಾನೆ 08.00 ರಿಂದ 9.00ಯ ವೇಳೆಯಲ್ಲಿ ನಿಮ್ಮ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-1 ರಂತೆ ಪೋಲಿಸರು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ಪಂಚನಾಮೆ ಮಾಡಿ 180 ಎಮ್ ಎಲ್ ನ 32 ಓಲ್ಡ ಟಾವರಿಂಗ್ ವಿಸ್ಕಿ ಟೆಟ್ರಾ ಪ್ಯಾಕಗಳು, 90 ಎಮ್ ಎಲ್ ನಂ 135 ಓರಿಜನಲ್ ಚಾಯ್ಸ ವಿಸ್ಕಿ ಟೆಟ್ರಾ ಪ್ಯಾಕಗಳು ಮತ್ತು ಒಂದು ಅಳತೆಯ ಮಾಪನ್ನು ಜಪ್ತು ಪಡಿಸಿಕೊಂಡು, ಅವುಗಳ ಪೈಕಿ ಪಂಚನಾಮೆ ಮಾಡಿ 180 ಎಮ್ ಎಲ್ ನ 13 ಓಲ್ಡ ಟಾವರಿಂಗ್ ವಿಸ್ಕಿ ಟೆಟ್ರಾ ಪ್ಯಾಕಗಳು ಮತ್ತು 90 ಎಮ್ ಎಲ್ ನಂ 26 ಓರಿಜನಲ್ ಚಾಯ್ಸ ವಿಸ್ಕಿ ಟೆಟ್ರಾ ಪ್ಯಾಕಗಳನ್ನು ರಾಸಾಯನಿಕ ಪರೀಕ್ಷೆಗೆ ಮಾದರಿ ತೆಗೆದು ಅವುಗಳನ್ನು ಒಂದು ರಟ್ಟಿನ ಪೆಟ್ಟಿಗೆಯಲ್ಲಿ ಹಾಕಿ ಬಿಳಿ ಬಣ್ಣದ ದಾರದಿಂದ ಸುತ್ತಿ ಇಲಾಖಾ ಮೊಹರಿನೊಂದಿಗೆ ಶೀಲ್ ಮಾಡಲಾಯಿತು ಎಂದರೆ ಸರಿಯಲ್ಲ.

ಈ ಎಲ್ಲಾ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯವಾಗುವಂತೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ಹೇಳಿರುತ್ತಾರೆ.</u>**

**ಮರು ವಿಚಾರಣೆ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಸವಣೂರು.